## 2003ರ ಕರ್ನಾಟಕ ಅಧಿನಿಯಮ ಸಂಖ್ಯೆ 16

## ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ತಿದ್ದುಪಡಿ) ಅಧಿನಿಯಮ, 2002

### ಪ್ರಕರಣಗಳ ಪಟ್ಟಿ

**ಪ್ರಕರಣಗಳು**

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ
2. 42ನೇ ಹೊಸ ಪ್ರಕರಣದ ಸೇರ್ಪಡೆ
3. ಕೆಲವು ಕ್ರಮಗಳು ಇತ್ಯಾದಿಗಳ ಮಾನ್ಯೀಕರಣ

### ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಅಧಿನಿಯಮ, 1992ರ ಉಪಬಂಧಗಳ ಅಡಿಯಲ್ಲಿ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವನ್ನು 1-6-1996 ರಂದು ಸ್ಥಾಪಿಸಲಾಯಿತು. ಈ ಅಧಿನಿಯಮದಲ್ಲಿ ಯಾವುವೇ ನಿರ್ದಿಷ್ಟ ಉಪಬಂಧಗಳು ಇರದಿದ್ದಾಗ್ಯೂ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಅಧಿನಿಯಮ, 1992ರ ಅಡಿಯಲ್ಲಿ ಪರಿನಿಯಮಗಳು, ಅಧ್ಯಾದೇಶಗಳು ಮತ್ತು ವಿನಿಯಮಗಳನ್ನು ಹೊರಡಿಸುವವರೆಗೆ ಮೈಸೂರು ವಿಶ್ವವಿದ್ಯಾನಿಲಯದ ಪರಿನಿಯಮಗಳು, ಅಧ್ಯಾದೇಶಗಳು ಮತ್ತು ವಿನಿಯಮಗಳನ್ನು ಅಳವಡಿಸಿಕೊಳ್ಳಲಾಗಿತ್ತು. ಆದ್ದರಿಂದ, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 1976ರ (1976ರ ಕರ್ನಾಟಕ ಅಧಿನಿಯಮ 28) ಅಡಿಯಲ್ಲಿ ಸ್ಥಾಪಿತವಾದ ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಜಾರಿಯಲ್ಲಿದ್ದ ಪರಿನಿಯಮಗಳು, ಅಧ್ಯಾದೇಶಗಳು ಮತ್ತು ವಿನಿಯಮಗಳನ್ನು ಮುಂದುವರಿಸುವುದಕ್ಕಾಗಿ ಮತ್ತು ಅದರ ಮೇಲೆ ಕೈಗೊಂಡ ಕ್ರಮವನ್ನು ಮಾನ್ಯಗೊಳಿಸುವುದಕ್ಕಾಗಿ ಉಪಬಂಧ ಕಲ್ಪಿಸುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

(2002 ರ ವಿಧಾನಸಭೆಯ ವಿಧೇಯಕ ಸಂಖ್ಯೆ 17)

(ಭಾರತ ಸಂವಿಧಾನದ ಏಳನೇ ಅನುಸೂಚಿಯ ಮೂರನೇ ಪಟ್ಟಿಯ 25ನೇ ನಮೂದು)

**2003ರ ಕರ್ನಾಟಕ ಅಧಿನಿಯಮ ಸಂಖ್ಯೆ 16**

*(2003ರ ಏಪ್ರಿಲ್ ಏಳನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)*

**ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ತಿದ್ದುಪಡಿ) ಅಧಿನಿಯಮ, 2002**

*(2003ರ ಏಪ್ರಿಲ್ ನಾಲ್ಕನೇ ದಿನಾಂಕದಂದು ಕರ್ನಾಟಕ ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)*

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಅಧಿನಿಯಮ, 1992ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಅಧಿನಿಯಮ, 1992ನ್ನು (1994ರ ಕರ್ನಾಟಕ ಅಧಿನಿಯಮ 46) ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೂರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ:-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ತಿದ್ದುಪಡಿ) ಅಧಿನಿಯಮ, 2002 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೆ ಜಾರಿಗೆ ಬರತಕ್ಕದ್ದು.

**2. 42ನೇ ಹೊಸ ಪ್ರಕರಣದ ಸೇರ್ಪಡೆ.-** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಅಧಿನಿಯಮ, 1992ರ (1994ರ ಕರ್ನಾಟಕ ಅಧಿನಿಯಮ 46) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 41ನೇ ಪ್ರಕರಣದ ತರುವಾಯ ಈ ಮುಂದಿನ ಪ್ರಕರಣವನ್ನು ಸೇರಿಸತಕ್ಕದ್ದು ಮತ್ತು ಯಾವಾಗಲೂ ಸೇರಿಸಿರುವುದಾಗಿ ಭಾವಿಸತಕ್ಕದ್ದು; ಎಂದರೆ:-

"**42. ಪರಿನಿಯಮಗಳು, ಅಧ್ಯಾದೇಶಗಳು ಮುಂತಾದವುಗಳ ಮುಂದುವರಿಕೆ.-** ಈ ಅಧಿನಿಯಮದ 23, 24 ಮತ್ತು 25ನೇ ಪ್ರಕರಣಗಳ ಅಡಿಯಲ್ಲಿ ಪರಿನಿಯಮಗಳು, ಅಧ್ಯಾದೇಶಗಳು ಮತ್ತು ನಿಯಮಗಳನ್ನು ರಚಿಸುವವರೆಗೆ, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 1976ರ (1976ರ ಕರ್ನಾಟಕ ಅಧಿನಿಯಮ 28) ಅಡಿಯಲ್ಲಿ ಸ್ಥಾಪಿತವಾದ ಅಂಚೆ ತೆರಪಿನ ಶಿಕ್ಷಣ ಕ್ರಮಗಳು ಮತ್ತು ಮುಂದುವರಿಕೆ ಶಿಕ್ಷಣ

ಕರ್ನಾಟಕ ರಾಜ್ಯ ಪತ್ರದ ಭಾಗIVಎ ವಿಶೇಷ ಪತ್ರಿಕೆ ಸಂಖ್ಯೆ: 380 ದಿನಾಂಕ: 7.4.2003 ರಲ್ಲಿ ಪ್ರಕಟಿತ
ಕಡತ ಸಂಖ್ಯೆ: ಸಂವ್ಯಶಾಇ 56 ಶಾಸನ 2001

ಸಂಸ್ಥೆ, ಮೈಸೂರು ಇದರ ವ್ಯವಹಾರಗಳನ್ನು ನಿಯಂತ್ರಿಸುವ ಮತ್ತು ಈ ಅಧಿನಿಯಮದ ಪ್ರಾರಂಭದ ನಿಕಟ ಪೂರ್ವದಲ್ಲಿ ಜಾರಿಯಲ್ಲಿರುವ ಮೈಸೂರು ವಿಶ್ವವಿದ್ಯಾನಿಲಯದ ಪರಿನಿಯಮಗಳು, ಅಧ್ಯಾದೇಶಗಳು, ವಿನಿಯಮಗಳು ಮತ್ತು ನಿಯಮಗಳು, ಸರ್ಕಾರದ ಮೂಲಕ ಪಡೆದುಕೊಂಡ ಕುಲಪತಿಯವರ ಅನುಮೋದನೆಯೊಡನೆ ಉಪ ಕುಲಪತಿಯು, ಅವುಗಳಲ್ಲಿ ಮಾಡಬಹುದಾದ ಅಂಥ ಅಳವಡಿಕೆಗಳು ಅಥವಾ ಮಾರ್ಪಾಡುಗಳಿಗೊಳಪಟ್ಟು, ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಿರುವಷ್ಟರ ಮಟ್ಟಿಗೆ, ಈ ಅಧಿನಿಯಮದ ಸೂಕ್ತ ಉಪಬಂಧಗಳ ಅಡಿಯಲ್ಲಿ ಮಾಡಿದ ಪರಿನಿಯಮಗಳು, ಅಧ್ಯಾದೇಶಗಳು ಮತ್ತು ವಿನಿಯಮಗಳು ಎಂದು ಭಾವಿಸತಕ್ಕದ್ದು ಮತ್ತು ಈ ಅಧಿನಿಯಮದ ಅಡಿಯಲ್ಲಿ ಮಾಡಿದ ಯಾವುದೇ ಕಾರ್ಯ ಅಥವಾ ಕೈಗೊಂಡ ಯಾವುದೇ ಕ್ರಮದ ಮೂಲಕ ರದ್ದುಗೊಳಿಸುವವರೆಗೆ ಅವು ಜಾರಿಯಲ್ಲಿರುವುದು ಮುಂದುವರಿಯತಕ್ಕದ್ದು."

**3. ಕೆಲವು ಕ್ರಮಗಳು ಇತ್ಯಾದಿಗಳ ಮಾನ್ಯೀಕರಣ:-** ಮೂಲ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದಾಗ್ಯೂ ಮೈಸೂರು ವಿಶ್ವವಿದ್ಯಾನಿಲಯದ ಪರಿನಿಯಮಗಳು, ಅಧ್ಯಾದೇಶಗಳು, ವಿನಿಯಮಗಳು ಅಥವಾ ನಿಯಮಗಳೆಂದು ಭಾವಿಸಲಾದ ಮತ್ತು ಹಾಗೆಂದು ಮುಂದುವರೆಸಲಾದ ಮೂಲ ಅಧಿನಿಯಮದ 42ನೇ ಪ್ರಕರಣದ ಅಡಿಯಲ್ಲಿ ವಿಶ್ವವಿದ್ಯಾನಿಲಯದ ಪರಿನಿಯಮಗಳು, ಅಧ್ಯಾದೇಶಗಳು ಅಥವಾ ವಿನಿಯಮಗಳ ಅಡಿಯಲ್ಲಿ 1996ರ ಜೂನ್ ಒಂದನೇ ದಿನಾಂಕದಿಂದ ಜಾರಿಗೆ ಬರುವಂತೆ ವಿಶ್ವವಿದ್ಯಾನಿಲಯ ಅಥವಾ ವಿಶ್ವವಿದ್ಯಾನಿಲಯದ ಯಾವುದೇ ಪ್ರಾಧಿಕಾರ, ಅಧಿಕಾರಿ, ಅಥವಾ ನೌಕರನು (ಮಾಡಿದ ಯಾವುದೇ ನೇಮಕ ಅಥವಾ ಪ್ರತಿಯೋಜನೆ ಅಥವಾ ನೀಡಿದ ಆದೇಶ, ಲಿಖಿತಪತ್ರ ಅಥವಾ ನಿರ್ದೇಶನವು ಒಳಗೊಂಡಂತೆ) ಮಾಡಿದ ಯಾವುದೇ ಕಾರ್ಯ, ಕೈಗೊಂಡ ಯಾವುದೇ ಕ್ರಮ ಅಥವಾ ನಡೆಸಿದ ಯಾವುದೇ ವ್ಯವಹರಣೆಯನ್ನು ಮೂಲ ಅಧಿನಿಯಮದ 42ನೇ ಪ್ರಕರಣದ ಉಪಬಂಧಗಳನ್ನು ಈ ಅಧಿನಿಯಮದ ಮೂಲಕ ಸೇರಿಸಲಾಗಿದ್ದರೆ ಹೇಗೋ ಹಾಗೆ ಮತ್ತು ಆ ಪ್ರಕರಣದ ಅಡಿಯಲ್ಲಿ ಮುಂದುವರಿಸಲಾದ, ಅಂಥ ಕಾರ್ಯ, ಕ್ರಮ ಅಥವಾ ನಡವಳಿಕೆಯನ್ನು ಮಾಡಲಾಗಿದ್ದ, ಕೈಗೊಳ್ಳಲಾಗಿದ್ದ ಅಥವಾ ನಡೆಸಲಾಗಿದ್ದ ಸುಸಂಬದ್ಧವಾದ ಎಲ್ಲ ಕಾಲಗಳಲ್ಲಿ ಜಾರಿಯಲ್ಲಿದ್ದ ಪರಿನಿಯಮಗಳು, ಅಧ್ಯಾದೇಶಗಳು ಮತ್ತು ವಿನಿಯಮಗಳು ಸಿಂಧುವಾಗಿವೆ ಮತ್ತು ಪರಿಣಾಮಕಾರಿಯಾಗಿವೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
**ಮ.ರಾ.ಹೆಗಡೆ**

151

ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.